# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**- ಕಾಪು ದಾಸ್ತಾನು ಯೋಜನೆಯಡಿ ರಸಗೊಬ್ಬರ ನಿರ್ವಹಿಸುವ ಕುರಿತು ಕಾಪು ದಾಸ್ತಾನು ಸಮಿತಿ ರಚಿಸುವ ಬಗ್ಗೆ.

**ಓದಲಾಗಿದೆ:**-1. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 04 ಕೃರಾಗೋ 2006 ದಿ:12-07-2006.

2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಕೃತೋಇ 04 ಕೃರಾಗೊ 2006 ದಿನಾಂಕ 05.08.2008.
3. ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಕೃಇ 31 ಕೃಇಕ 2017 ದಿ:03.04.2019.
4. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ರಗೊವಿ/ಕಾ.ದಾ/2018-19 ದಿ:05.11.2018.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ರಸಗೊಬ್ಬರದ ಕಾಪು ದಾಸ್ತಾನಿಗಾಗಿ 2006-07ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾಮಂಡಳಕ್ಕೆ ಆರ್ಥಿಕ ನೆರವು ನೀಡುವ ಯೋಜನೆಯ ಅನುಷ್ಠಾನದ ಮೇಲ್ವಿಚಾರಣೆ ಮಾಡುವ ಸಲುವಾಗಿ ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಿ, ಸಮಿತಿಯ ಸ್ವರೂಪ ಹಾಗೂ ರೂಪು ರೇಷೆಗಳನ್ನು ಮಂಜೂರಾತಿ ನೀಡಲಾಗಿದೆ. ಸಮಿತಿಯ ವಿವರ ಕೆಳಕಂಡಂತಿದೆ:

| ಕ್ರ.ಸಂ. | ಪದನಾಮ | ಷರಾ |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಮತ್ತು ತೋಟಗಾರಿಕೆ ಇಲಾಖೆ | ಅಧ್ಯಕ್ಷರು |
| 2 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬೆಂಗಳೂರು | ಸದಸ್ಯರು |
| 3 | ಕೃಷಿ ಆಯುಕ್ತರು / ಕೃಷಿ ನಿರ್ದೇಶಕರು, ಬೆಂಗಳೂರು | ಸದಸ್ಯರು |
| 4 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತ, ಬೆಂಗಳೂರು | ಸದಸ್ಯರು |
| 5 | ಆಯುಕ್ತರು / ನಿರ್ದೇಶಕರು, ಕೃಷಿ ಮಾರುಕಟ್ಟೆ ಇಲಾಖೆ, ಬೆಂಗಳೂರು | ಸದಸ್ಯರು |
| 6 | ಅಪರ ಕೃಷಿ ನಿರ್ದೇಶಕರು (ಸಾವಯವ ಕೃಷಿ), ಬೆಂಗಳೂರು | ಸದಸ್ಯ ಕಾರ್ಯದರ್ಶಿ |

ಮೇಲೆ (2) ರಲ್ಲಿ ಓದಲಾದ ಸರ್ಕಾರದ ತಿದ್ದುಪಡಿ ಆದೇಶದಲ್ಲಿ, ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಚಿಸಲಾಗಿದ್ದ ಯೋಜನೆಯ ಮೇಲ್ವಿಚಾರಣೆ ಮಾಡುವ ಸಲುವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕೃಷಿ ಮತ್ತು ತೋಟಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಚಿಸಿದ್ದ ಸಮಿತಿಯನ್ನು ಮಾರ್ಪಡಿಸಿ ಕೆಳಕಂಡಂತೆ ತಿದ್ದುಪಡಿ ಆದೇಶ ಹೊರಡಿಸಲಾಗಿದೆ.

| ಕ್ರ.ಸಂ. | ಪದನಾಮ | ಷರಾ |
|---|---|---|
| 1 | ಕೃಷಿ ಆಯುಕ್ತರು, ಬೆಂಗಳೂರು | ಅಧ್ಯಕ್ಷರು |
| 2 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳಿ ನಿಯಮಿತ, ಬೆಂಗಳೂರು | ಸದಸ್ಯರು |
| 3 | ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರು | ಸದಸ್ಯರು |
| 4 | ಕೃಷಿ ನಿರ್ದೇಶಕರು, ಬೆಂಗಳೂರು | ಸದಸ್ಯ ಕಾರ್ಯದರ್ಶಿ |

ಮೇಲೆ (3) ರಲ್ಲಿ ಓದಲಾದ ಸರ್ಕಾರದ ಸೇರ್ಪಡೆ ಆದೇಶದಲ್ಲಿ, ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಕಾಪು ದಾಸ್ತಾನು ಯೋಜನೆಯಡಿ ಪ್ರಮುಖ ರಸಗೊಬ್ಬರಗಳನ್ನು ಕಾಪು ದಾಸ್ತಾನು ರೂಪದಲ್ಲಿ ಸಂಗ್ರಹಿಸಿ .ರೈತರಿಗೆ ಮಾರಾಟ ಮಾಡುವ ಯೋಜನೆಯ ಅನುಷ್ಠಾನಕ್ಕೆ ಮಾರ್ಗಸೂಚಿಯನ್ನು ಸೇರ್ಪಡಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ (4) ರಲ್ಲಿ ಓದಲಾದ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ, ರಾಜ್ಯದ ರೈತರಿಗೆ ಸಕಾಲದಲ್ಲಿ ರಸಗೊಬ್ಬರ ಪೂರೈಕೆ ಮಾಡುವ ಸಲುವಾಗಿ ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿಯ ಮೂಲಕ ರಸಗೊಬ್ಬರ ಕಾಪು ದಾಸ್ತಾನು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ದಿನಾಂಕ 12.10.2018 ರಂದು ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಕಾಪು ದಾಸ್ತಾನು ಸಭೆಯಲ್ಲಿ ರಸಗೊಬ್ಬರದ ಕೊರತೆಯಿಂದ ರೈತರಿಗೆ ಸಕಾಲದಲ್ಲಿ ರಸಗೊಬ್ಬರ ಒದಗಿಸದಿದ್ದಲ್ಲಿ ಉಂಟಾಗುವ ಕಾನೂನಾತ್ಮಕ ತೊಂದರೆಗಳನ್ನು ತಪ್ಪಿಸಲು ಕಾಪು ದಾಸ್ತಾನು ಯೋಜನೆಯಡಿ ರಸಗೊಬ್ಬರ ಒದಗಿಸುವ ಕುರಿತು ತಯಾರಿಸಿರುವ ಮಾರ್ಗಸೂಚಿಗೆ ಅನುಮೋದನೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಸರ್ಕಾರವು ಪರಿಶೀಲಿಸಿ, ಕಾಪು ದಾಸ್ತಾನು ಯೋಜನೆಯಡಿ ರಸಗೊಬ್ಬರಗಳನ್ನು ನಿರ್ವಹಿಸುವ ಬಗ್ಗೆ ಮಾರ್ಗಸೂಚಿಯನ್ನು ಮೇಲೆ (3) ರಲ್ಲಿ ಓದಲಾದ ಸೇರ್ಪಡೆ ಆದೇಶದಲ್ಲಿ ಹೊರಡಿಸಲಾಗಿದ್ದು, ಈ ಸಂಬಂಧ ಕಾಪು ದಾಸ್ತಾನು ಯೋಜನೆಯಡಿ ರಸಗೊಬ್ಬರ ನಿರ್ವಹಿಸುವ ಕುರಿತು ಕಾಪು ದಾಸ್ತಾನು ಸಮಿತಿಯನ್ನು ಮೇಲೆ (2) ರಲ್ಲಿ ಓದಲಾದ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ರಚಿಸಲಾಗಿದ್ದ ಕಾಪು ದಾಸ್ತಾನು ಸಮಿತಿಯನ್ನು ಮಾರ್ಪಡಿಸಿ, ಆದೇಶ ಹೊರಡಿಸಲು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂ: ಕೃಇ 31 ಕೃಇಕ 2018 ಬೆಂಗಳೂರು, ದಿನಾಂಕ: 19-06-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕಾಪು ದಾಸ್ತಾನು ಯೋಜನೆಯಡಿ ಪ್ರಮುಖ ರಸಗೊಬ್ಬರಗಳನ್ನು ಕಾಪು ದಾಸ್ತಾನು ರೂಪದಲ್ಲಿ ಸಂಗ್ರಹಿಸಿ ರೈತರಿಗೆ ಮಾರಾಟ ಮಾಡುವ ಯೋಜನೆಯ ಅನುಷ್ಠಾನಕ್ಕೆ ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಕೃತೋಇ 04 ಕೃರಾಗೊ 2006 ದಿನಾಂಕ 05.08.2008ರ ಆದೇಶದಲ್ಲಿ ರಚಿಸಲಾಗಿದ್ದ ಸಮಿತಿಯನ್ನು ಈ ಕೆಳಕಂಡಂತೆ ಮಾರ್ಪಡಿಸಿ, ಆದೇಶಿಸಿದೆ.

| ಕ್ರ ಸಂ. | ಪದನಾಮ | ಷರಾ |
|---|---|---|
| 1 | ಕೃಷಿ ಆಯುಕ್ತರು, ಬೆಂಗಳೂರು | ಅಧ್ಯಕ್ಷರು |
| 2 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತ, ಬೆಂಗಳೂರು | ಸದಸ್ಯರು |
| 3 | ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರು | ಸದಸ್ಯರು |
| 4 | ಕೃಷಿ ನಿರ್ದೇಶಕರು, ಬೆಂಗಳೂರು | ಸದಸ್ಯರು |
| 5 | ರಸಗೊಬ್ಬರ ಸರಬರಾಜು ಸಂಸ್ಥೆಗಳಿಂದ ಇಬ್ಬರು ಪ್ರತಿನಿಧಿಗಳು (LFS ಪ್ರತಿನಿಧಿ ಹಾಗೂ ಅವಶ್ಯಕತೆ ಆಧಾರದ ಮೇರೆಗೆ ಮತ್ತೊಂದು ಸಂಸ್ಥೆಯ ಪ್ರತಿನಿಧಿ) | ಸದಸ್ಯರು |
| 6 | ಅಪರ ಕೃಷಿ ನಿರ್ದೇಶಕರು (ಸಾವಯವ ಕೃಷಿ) | ಸದಸ್ಯರು |
| 7 | ಜಂಟಿ ಕೃಷಿ ನಿರ್ದೇಶಕರು (ರಸಗೊಬ್ಬರ ಮತ್ತು ಸಸ್ಯ ಸಂರಕ್ಷಣೆ) | ಸದಸ್ಯರು |
| 8 | ಅವಶ್ಯಕತೆ ಆಧಾರದ ಮೇರೆಗೆ 2 ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು | ಸದಸ್ಯರು |
| 9 | ಉಪ ಕೃಷಿ ನಿರ್ದೇಶಕರು (ಗೊಬ್ಬರ ಹಾಗೂ ಸಾವಯವ ಗೊಬ್ಬರ) | ಸದಸ್ಯ ಕಾರ್ಯದರ್ಶಿ |

ಈ ಸಮಿತಿಯು ಇನ್ನು ಮುಂದೆ ಕೃಷಿ ಆಯುಕ್ತರು ಹಾಗೂ ಅಧ್ಯಕ್ಷರ ನೇತೃತ್ವದಲ್ಲಿ ಕಾರ್ಯ ನಿರ್ವಹಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕೃತೋಇ 04 ಕೃರಾಗೊ 2006 ದಿನಾಂಕ 12.07.2006 ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಕೃಇ 31 ಕೃಇಕ 2017 ದಿನಾಂಕ 03.04.2019ರ ಆದೇಶವಲ್ಲಿ ತಿಳಿಸಿರುವ ಅಂಶಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆಃ-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾಮಂಡಳ, ಬೆಂಗಳೂರು
6. ಆಯುಕ್ತರು, ಕೃಷಿ ಮಾರುಕಟ್ಟೆ ಇಲಾಖೆ, ರಾಜಭವನ ರಸ್ತೆ, ಬೆಂಗಳೂರು
7. ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರು
8. LFS, ರಸಗೊಬ್ಬರ ಸರಬರಾಜು ಸಂಸ್ಥೆಗಳಿಂದ ಇಬ್ಬರು ಪ್ರತಿನಿಧಿಗಳು
9. ಅಪರ ಕೃಷಿ ನಿರ್ದೇಶಕರು (ಸಾವಯವ ಕೃಷಿ), ಕೃಷಿ ಆಯುಕ್ತರ ಕಾರ್ಯಾಲಯ, ಬೆಂಗಳೂರು
10. ಜಂಟಿ ಕೃಷಿ ನಿರ್ದೇಶಕರು (ರಸಗೊಬ್ಬರ ಮತ್ತು ಸಸ್ಯ ಸಂರಕ್ಷಣೆ), ಬೆಂಗಳೂರು
11. ರಾಜ್ಯದ ಎಲ್ಲಾ ಜಂಟಿ ಕೃಷಿ ನಿರ್ದೇಶಕರು
12. ಉಪ ಕೃಷಿ ನಿರ್ದೇಶಕರು, (ಗೊಬ್ಬರ ಹಾಗೂ ಸಾವಯವ ಗೊಬ್ಬರ), ಕೃಷಿ ಆಯುಕ್ತರ ಕಾರ್ಯಾಲಯ, ಬೆಂಗಳೂರು
13. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು
14. ನಿರ್ದೇಶಕರು, (ಪಿ.ಎಂ.ಐ), ಯೋಜನಾ ಇಲಾಖೆ, ಬೆಂಗಳೂರು
15. ಸರ್ಕಾರದ ಜಂಟಿ ಕಾರ್ಯದರ್ಶಿಗಳು ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ
16. ಮಾನ್ಯ ಮುಖ್ಯಮಂತ್ರಿಯರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
17. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
18. ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ
19. ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ
20. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ: 5 ರಿಂದ 12 ಕೃಷಿ ನಿರ್ದೇಶಕರವರ ಮೂಲಕ)

ಕರ್ನಾಟಕ ಸರ್ಕಾರ

ಸಂಖ್ಯೆ: ಕೃಇ 31 ಕೃಇಕ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 19.06.2019

## ತಿದ್ದುಪಡಿ

ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಕೃಇ 31 ಕೃಇಕ 2017 ದಿನಾಂಕ 03.04.2019ರ ಆದೇಶದ ಸಂಖ್ಯೆ: ಕೃಇ 31 ಕೃಇಕ 2017ರ ಬದಲಾಗಿ ಸಂಖ್ಯೆ: ಕೃಇ 31 ಕೃಇಕ 2018 ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

BS Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3. ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾಮಂಡಳ, ಬೆಂಗಳೂರು
6. ಆಯುಕ್ತರು, ಕೃಷಿ ಮಾರುಕಟ್ಟೆ ಇಲಾಖೆ, ರಾಜಭವನ ರಸ್ತೆ, ಬೆಂಗಳೂರು
7. ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರು
8. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು
9. ನಿರ್ದೇಶಕರು, (ಪಿ.ಎಂ.ಐ), ಯೋಜನಾ ಇಲಾಖೆ, ಬೆಂಗಳೂರು
10. ಸರ್ಕಾರದ ಜಂಟಿ ಕಾರ್ಯದರ್ಶಿಗಳು ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ
11. ಮಾನ್ಯ ಮುಖ್ಯಮಂತ್ರಿಯರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
12. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
13. ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ
14. ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ
15. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ: 7 ಕೃಷಿ ನಿರ್ದೇಶಕರವರ ಮೂಲಕ)